ಹಾಸಿಗೆಗಳುಳ್ಳ ಆಸ್ಪತ್ರೆಯನ್ನು 50 ಹಾಸಿಗೆಗಳ ಆಸ್ಪತ್ರೆಗೆ ಮೇಲ್ದರ್ಜೆಗೆ ಏರಿಸಬೇಕು ಎಂದು ಹೇಳಿದ್ದೀರಿ. ಅದರ ಬಗ್ಗೆ ಹೇಳುವುದಾದರೆ ಎಕ್ಸ್‌ರೇ ಪ್ಲಾಂಟ್ ತಕ್ಷಣ ಕೊಡಿಸುತ್ತೇವೆ. ಆಸ್ಪತ್ರೆ ಬಗ್ಗೆ 1994-95ನೇ ಸಾಲಿನ ಏಪ್ರಿಲ್ ಮತ್ತು ಮೇನಲ್ಲಿ ಮಂಜೂರು ಮಾಡುತ್ತೇವೆ.

ಶಾಸನ ರಚನಾ ಕಾರ್ಯ ಕಲಾಪಗಳು

ಎ) ಪರ್ಯಾಲೋಚನಾ ಪ್ರಸ್ತಾವ .

ಶ್ರೀ ಚೌಡಾರೆಡ್ಡಿ (ವಸತಿ ನಗರಾಭಿವೃದ್ಧಿ ಸಚಿವರು) : ಮಾನ್ಯ ಅಧ್ಯಕ್ಷರೆ, ಅಕ್ರಮ ಕಟ್ಟಡಗಳ ಸಕ್ರಮದ ಬಗ್ಗೆ ಮಸೂದೆ ಇದೆ. ಅದನ್ನು ನಿನ್ನೆ ಮುಗಿಸಬೇಕಾಗಿತ್ತು. ಇದ್ದಕ್ಕಿದ್ದ ಹಾಗೆ ಸಭೆ ಅಜರ್ನ್ ಆಯಿತು. ನಿನ್ನೆ ನಾನು ಈ ತಿದ್ದುಪಡಿಯನ್ನು ಪರ್ಯಾಲೋಚಿಸಬೇಕೆಂದು ಸಂಕ್ಷಿಪ್ತವಾಗಿ ತಿಳಿಸಿದ್ದೇನೆ. ಇದನ್ನು ಮತಕ್ಕೆ ಹಾಕಬೇಕೆಂದು ತಮ್ಮನ್ನು ಕೇಳಿಕೊಳ್ಳುತ್ತೇನೆ.

ಶ್ರೀ ಪಿ.ಜಿ.ಆರ್. ಸಿಂಧ್ಯ : ಮಾನ್ಯ ಅಧ್ಯಕ್ಷರೆ, ನಮ್ಮ ಸರ್ಕಾರ ಅಧಿಕಾರದಲ್ಲಿದ್ದಾಗ ಇದನ್ನು ಜಾರಿ ಮಾಡಬೇಕೆಂದಿದ್ದೆವು, ನಮ್ಮ ಕೈಯಲ್ಲಿ ಆಗಲಿಲ್ಲ. ಈಗ ನೀವು ಮಾಡಿದ್ದೀರಿ, ಇದನ್ನು ನಾವು ಸ್ವಾಗತಿಸಿದ್ದೇವೆ. ಇದನ್ನು ಮತಕ್ಕೆ ಹಾಕಿ ಎಂದು ಹೇಳುತ್ತಿದ್ದೇವೆ.

ಶ್ರೀ ಬಿ.ಹೆಚ್. ಬನ್ನಿಕೋಡ್ : ತಾವು ಏನು ನಗರ ಪ್ರದೇಶಗಳಲ್ಲಿರುವ ಅಕ್ರಮ ಕಟ್ಟಡಗಳನ್ನು ಸಕ್ರಮಗೊಳಿಸಬೇಕೆಂದು ಕಾನೂನು ತಂದಿದ್ದೀರಿ, ಅದೇ ರೀತಿ ಗ್ರಾಮಾಂತರ ಪ್ರದೇಶಗಳಲ್ಲಿರುವ ಅನೇಕ ಅಕ್ರಮ ಕಟ್ಟಡಗಳನ್ನು ಸಕ್ರಮಗೊಳಿಸುವ ಕಾನೂನನ್ನು ಜಾರಿಗೆ ತಂದರೆ ಬಡವರಿಗೆ ಅನುಕೂಲವಾಗುತ್ತದೆ. ಆದುದರಿಂದ, ಈ ಕಾನೂನಿಗೆ ತಿದ್ದುಪಡಿ ತರಬೇಕೆಂದು ತಮ್ಮ ಮೂಲಕ ಸರ್ಕಾರಕ್ಕೆ ಹೇಳುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, "1993ರ ಕರ್ನಾಟಕ ನಗರ ಪ್ರದೇಶದಲ್ಲಿರುವ ಅನಧಿಕೃತ ನಿರ್ಮಾಣಗಳನ್ನು ಸಕ್ರಮಗೊಳಿಸುವ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು.

ಖಂಡ 2 ರಿಂದ 9 ರವರೆಗೆ

ಅಧ್ಯಕ್ಷರು : "ಖಂಡ 2 ರಿಂದ 9 ರವರೆಗೆ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

(ಖಂಡ 2 ರಿಂದ 9ರ ವರೆಗೆ ಎರಡೂ ಸೇರಿದಂತೆ ಈ ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, "ಮೊದಲನೆ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ."

ಪ್ರಸ್ತಾವವನ್ನು ಅಂಗೀಕರಿಸಲಾಯಿತು.

(ಮೊದಲನೆ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ಈ ವಿಧೇಯಕ್ಕೆ ಸೇರಿಸಲಾಯಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಚೌಡರೆಡ್ಡಿ (ನಗರಾಭಿವೃದ್ಧಿ ಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, 1993ರ ಕರ್ನಾಟಕ ನಗರ ಪ್ರದೇಶದಲ್ಲಿರುವ ಅನಧಿಕೃತ ನಿರ್ಮಾಣಗಳನ್ನು ಸಕ್ರಮಗೊಳಿಸುವ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, "1993ರ ಕರ್ನಾಟಕ ನಗರ ಪ್ರದೇಶದಲ್ಲಿರುವ ಅನಧಿಕೃತ ನಿರ್ಮಾಣಗಳನ್ನು ಸಕ್ರಮಗೊಳಿಸುವ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

1994ರ ಕನ್ನಡ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಹೆಚ್. ವಿಶ್ವನಾಥ್ (ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು) ಮಾನ್ಯ ಅಧ್ಯಕ್ಷರೇ, 1994ರ ಕನ್ನಡ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿಯನ್ನು ಕೋರುತ್ತೇವೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ "1994ರ ಕನ್ನಡ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಹೆಚ್. ವಿಶ್ವನಾಥ್ (ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಮಂತ್ರಿಗಳು) 1994ರ ಕನ್ನಡ ಅಭಿವೃದ್ಧಿ ಪ್ರಾಧಿಕಾರದ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ.

ಅನುಬಂಧ - I

1993ರ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ಮೂರನೇ ತಿದ್ದುಪಡಿ) ವಿಧೇಯಕ ಪರ್ಯಾಲೋಚನಾ ಪ್ರಸ್ತಾವ

ಶ್ರೀ ಎಂ. ವೀರಪ್ಪ ಮೊಯಿಲಿ (ಮುಖ್ಯಮಂತ್ರಿಯವರು) : ಮಾನ್ಯ ಅಧ್ಯಕ್ಷರೇ 1993ನೇ ಸಾಲಿನ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ಮೂರನೆ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು.

ಶ್ರೀ ಎಂ. ವೀರಪ್ಪ ಮೊಯಿಲಿ (ಮುಖ್ಯಮಂತ್ರಿಗಳು) : ಸನ್ಮಾನ್ಯ ಅಧ್ಯಕ್ಷರೇ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಬಲ್ಕ್ ಅಲಾಟ್ ಮೆಂಟ್ ವಿಚಾರದಲ್ಲಿ ಹೈಕೋರ್ಟ್ ತೀರ್ಪಿನಿಂದ ಅನೇಕ ಅಲಾಟ್ಮೆಂಟ್ಗಳು ಕ್ಯಾನ್ಸಲ್ ಆಗಿವೆ. ಅನೇಕ ಸರ್ಕಾರಿ ಸಂಸ್ಥೆಗಳಿಗೆ ಕೊಟ್ಟಿದ್ದಂತಹ ಹಾಗೂ ಹೌಸಿಂಗ್ ಸೊಸೈಟಿಗಳಿಗೆ ಕೊಟ್ಟಿದ್ದಂತಹ, ಶಾಸಕರ ಸಂಘಗಳಿಗೆ ಕೊಟ್ಟಿದ್ದಂತಹವು ಇನ್ವ್ಯಾಲಿಡ್ ಆಗಿದೆ. ಇದನ್ನು ವ್ಯಾಲಿಡೇಷನ್ ಮಾಡಲಿಕ್ಕೆ ಈ ಬಿಲ್ಲನ್ನು ತಂದಿದ್ದೇವೆ. ದಯಮಾಡಿ ಇದಕ್ಕೆ ಮಾನ್ಯ ಸಭೆ ಒಪ್ಪಿಗೆ ಕೊಡಬೇಕೆಂದು ಹೇಳುತ್ತೇನೆ.